**1 ನೇ ಹೆಚ್ಚುವರಿ  ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ.,ರವರ ನ್ಯಾಯಾಲಯ, ಕಡೂರು.**

ಅಸಲು ದಾವೆ ಸಂಖ್ಯೆ 633/2022.

ಪಿ.ಡಬ್ಲ್ಯು:1

**ದಿನಾಂಕ 14.07.2023 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆಃ ವಾದಿಪರ ಶ್ರೀ. ಸಿ ವಿ ಎಸ್ ವಕೀಲರಿಂದಃ-**

ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣಪತ್ರದ ಮೂಲಕ ಸಲ್ಲಿಸುತ್ತಿದ್ದೇನೆ. ಅದನ್ನು ಓದಿ ತಿಳಿದು, ಸಹಿ ಮಾಡಿರುತ್ತೇನೆ. ಅದರಲ್ಲಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತವೆ.

1. ದಿನಾಂಕ 21.06.2016 ರಂದು ಪ್ರತಿವಾದಿಯರು ಬರೆದುಕೊಟ್ಟಿರುವ ಕರಾರು ಪತ್ರವನ್ನು ಹಾಜರುಪಡಿಸಿರುತ್ತಾರೆ. ಸದರಿ ಕರಾರು ಪತ್ರವನ್ನು ಪರಿಶೀಲಿಸಲಾಗಿ ರೂ.200/- ಛಾಪಾ ಕಾಗದದ ಮೇಲೆ ಬರೆಯಲಾಗಿದೆ ಮತ್ತು ನಿರ್ದಿಷ್ಟ ಮುಂದ್ರಾಂಕ ಶುಲ್ಕ ಹೊಂದಿರುವುದಿಲ್ಲ, ಆ ಕಾರಣ ಸದರಿ ಕ್ರಯ ಕರಾರು ಪತ್ರವನ್ನು ಮುಟ್ಟುಗೋಲು ಹಾಕಿಕೊಳ್ಳಲಾಯಿತು.

2. ಒಪ್ಪಹುಣಸೆ ಗ್ರಾಮದ ಸರ್ವೆ ನಂ.89/1 ಸಿ ಪಹಣಿಯನ್ನು ಹಾಜರುಪಡಿಸಿರುತ್ತೇನೆ, ಸದರಿ ದಾಖಲೆಯನ್ನು ನಿಪಿ-1 ಎಂದು ಗುರುತಿಸಲಾಯಿತು.

**ಪಾಟೀ ಸವಾಲು** ಃ- ಪ್ರತಿವಾದಿಯವರು ಲಿಖಿತ ತಕರಾರು ಸಲ್ಲಿಸಿರುವುದಿಲ್ಲ, ಆ ಕಾರಣ ಪಾಟೀ ಸವಾಲು ಇಲ್ಲ ಎಂದು ಪರಿಗಣಿಸಲಾಯಿತು.

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)**

ಓ ಹೇ ಕೇ ಸ ಇ

Sd/-

ಒಂದನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಃದಃನ್ಯಾಃದಂ.,ರವರು ಕಡೂರು.